ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಬೃ.ಬೆಂ.ಮ.ಪಾ.

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE 02/03/2020

# ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ: ಆಯುಕ್ತ ಎಚ್ಚರಿಕೆ

ಪ್ರಜಾವಾಣಿ ವಾರ್ತೆ 2-3-20

ಬೆಂಗಳೂರು: ವಿಧಾನಸಭೆಯಲ್ಲಿ ನಿಯಮ 69ರಡಿ ಶಾಸಕರು ಕೇಳಿದ ಪ್ರಶ್ನೆಗೆ ಉತ್ತರ ನೀಡದ ಪಾಲಿಕೆ ಅಧಿಕಾರಿಗಳ ಕ್ರಮಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತ ಬಿ.ಎಚ್.ಅನಿಲ್ ಕುಮಾರ್, ಮುಂದಿನ ದಿನಗಳಲ್ಲಿ ಮಾಹಿತಿ ನೀಡದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ್ದಾರೆ.

ಜೆಡಿಎಸ್ ಕ್ಷೇತ್ರಗಳಿಗೆ ಅನುದಾನ ಕಡಿತ ಮಾಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಶಾಸಕರಾದ ಎಚ್.ಡಿ.ಕುಮಾರಸ್ವಾಮಿ, ಎಚ್.ಡಿ.ರೇವಣ್ಣ, ಕೆ.ಶ್ರೀನಿವಾಸಗೌಡ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ನಿಯಮ 69ರಡಿ ಚರ್ಚೆಗೆ ಅವಕಾಶ ಕೋರಿದ್ದರು.ಈ ಸಂಬಂಧ ಪೂರಕ ಮಾಹಿತಿಗಳನ್ನು ನಿಗದಿತ ಸಮಯದೊಳಗೆ ಒದಗಿಸುವಂತೆ ನಗರಾಭಿವೃದ್ಧಿ ಇಲಾಖೆ ಸೂಚಿಸಿತ್ತು. ಆದರೆ, ಅಧಿಕಾರಿಗಳು ಮಾಹಿತಿ ನೀಡಿರಲಿಲ್ಲ. ಬಿಬಿಎಂಪಿ ಪ್ರಧಾನ ಮುಖ್ಯ ಎಂಜಿನಿಯರ್, ಎಲ್ಲ ವಲಯಗಳ ಮುಖ್ಯ ಎಂಜಿನಿಯರ್ ಹಾಗೂ ಮುಖ್ಯ ಎಂಜಿನಿಯರ್‌ಗಳ (ಕೆರೆ, ಯೋಜನೆ, ರಾಜಕಾಲುವೆ) ಧೋರಣೆಗೆ ನಗರಾಭಿವೃದ್ಧಿ ಇಲಾಖೆ ಅಸಮಾಧಾನ ವ್ಯಕ್ತಪಡಿಸಿತ್ತು.

ಅಧಿವೇಶನದಲ್ಲಿ ಮಂಡಿಸಲ್ಪಡುವ ಗಮನ ಸೆಳೆಯುವ ಸೂಚನೆಗಳು ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು ವಿಶೇಷ ಆಯುಕ್ತರ ಮೂಲಕ ಮಾಹಿತಿ ನೀಡಬೇಕು ಎಂದು ಆಯುಕ್ತರು ಸೂಚಿಸಿದ್ದಾರೆ.